5)	ಗುಲ್ಬರ್ಗಾ	ಅದೇ	ಅದೇ
6)	ಕುವೆಂಪು	1988-98 ರಿಂದ ಯಾವುದೂ ಬಂದಿಲ್ಲ.	
7)	ಕನ್ನಡ	1991-92 ರಿಂದ ಯಾವುದೂ ಬಂದಿಲ್ಲ. ಲೆಕ್ಕ ಪರಿಶೋಧನಾ ವರದಿ	

ವಿಶ್ವವಿದ್ಯಾಲಯ		ಯಾವ ವರ್ಷ ಬಂದಿಲ್ಲ	
1)	ಮೈಸೂರು	1994-95	
2)	ಬೆಂಗಳೂರು	1992-93	93-94, 94-95
3)	ಮಂಗಳೂರು	1993-94	94-95
4)	ಕರ್ನಾಟಕ	1994-95	
5)	ಗುಲ್ಬರ್ಗಾ	1993-94	94-95
6)	ಕುವೆಂಪು	1988-89 ರಿಂದ ಯಾವುದೂ ಬಂದಿಲ್ಲ	
7)	ಕನ್ನಡ	1991-92 ರಿಂದ ಯಾವುದೂ ಬಂದಿಲ್ಲ.	

ಇ) ದಿನಾಂಕ 8-11-95 ರಂದು ಕಾಗದ ಪತ್ರಗಳ ಸಮಿತಿಯ ಸಭೆಯಲ್ಲಿ ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರಿಗೆ ಮತ್ತು ಆರ್ಥಿಕ ಅಧಿಕಾರಿಗಳಿಗೆ ವರದಿಗಳನ್ನು ನಿಗದಿತ ಕಾಲಮಿತಿಯೊಳಗೆ ಸಲ್ಲಿಸುವಂತೆ ಸ್ಪಷ್ಟ ಸೂಚನೆ ನೀಡಲಾಗಿದೆ. ಈ ಬಗ್ಗೆ ದಿನಾಂಕ 16-1-96 ಸಂಖ್ಯೆ: ಇಡಿ 17 ಯುಎಸಐ 96ರ ಸುತ್ತೋಲೆಯನ್ನು ಸಹ ಹೊರಡಿಸಲಾಗಿದೆ.

ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಕುಡಿಯುವ ನೀರಿನ ವ್ಯವಸ್ಥೆ.

408 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಾಥಮಿಕ ಶಾಲೆಗಳ ಮತ್ತು ಪ್ರೌಢಶಾಲೆಗಳ ಮೂಲಭೂತ ಸೌಕರ್ಯಗಳಲ್ಲಿ ಒಂದಾದ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುವುದೇ.

ಆ) ಹಾಗಿದ್ದಲ್ಲಿ, ಮಾಡದಿರಲು ಕಾರಣವೇನು?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ರಾಜ್ಯದಲ್ಲಿ ಪ್ರಸ್ತ 21637 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳು, 15707 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು ಹಾಗೂ 2017 ಸರ್ಕಾರಿ ಪ್ರೌಢ ಶಾಲೆಗಳಿದ್ದು, ಇವುಗಳಲ್ಲಿ 5541 ಕಿರಿಯ ಪ್ರಾಥಮಿಕ ಶಾಲೆ, 6082 ಹಿರಿಯ ಪ್ರಾಥಮಿಕ ಶಾಲೆ ಹಾಗೂ 961 ಪ್ರೌಢ ಶಾಲೆಗಳಿಗೆ ಮಾತ್ರ ಕುಡಿಯುವ ನೀರಿನ ಸೌಲಭ್ಯವಿರುತ್ತದೆ. ಉಳಿದ ಶಾಲೆಗಳಿಗೂ ಈ

ಸೌಲಭ್ಯವನ್ನು ಕಲ್ಪಿಸಲಾಗುವುದು. ಇದನ್ನು ಹಂತ ಹಂತವಾಗಿ ಮಾಡಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಕುಂದಾಪುರ ತಾಲ್ಲೂಕಿನ ಬಿಡ್ಕಲ್ ಕಟ್ಟೆ ಹಾಗೂ ಉಡುಪಿ ತಾಲ್ಲೂಕಿನ ಗೋಳಿ ಅಂಗಡಿ ಪದವಿ ಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡ ಇಲ್ಲದೆ ಇರುವುದು.

410 - ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಕುಂದಾಪುರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ಕ್ಷೇತ್ರದ ಕುಂದಾಪುರ ತಾಲ್ಲೂಕಿನ ಬಿಡ್ಕಲ್ ಕಟ್ಟೆ ಪದವಿ ಪೂರ್ವ ಕಾಲೇಜಿಗೆ ಮತ್ತು ಉಡುಪಿ ತಾಲ್ಲೂಕಿನ ಗೋಳಿ ಅಂಗಡಿ ಪದವಿ ಪೂರ್ವಕಾಲೇಜಿಗೆ ಸ್ವಂತ ಕಟ್ಟಡ ಇಲ್ಲವೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದಲ್ಲಿ, ಈ ವಿಷಯದಲ್ಲಿ ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಡಿ. ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಕುಂದಾಪುರದ ಕ್ಷೇತ್ರದ ಬಿತ್ಕಲಕಟ್ಟೆ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರಸ್ತುತ ಪ್ರೌಢಶಾಲೆಯ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು ಪ್ರೌಢ ಶಾಲೆಯಲ್ಲಿ ಲಭ್ಯವಿರುವ 13 ಕೊಠಡಿಗಳ ಪೈಕಿ 11 ಕೊಠಡಿಗಳಲ್ಲಿ ಪ್ರೌಢ ಶಾಲಾ ವಿಭಾಗವು ಕಾಲೇಜಿನ ವಿಭಾಗವು ನಡೆಯುತ್ತಿದೆ. ಇನ್ನೂ 4 ಕೊಠಡಿಗಳಲ್ಲಿ ಪದವಿ ಪೂರ್ವ ಕಾಲೇಜಿನ ವಿಭಾಗವು ನಡೆಯುತ್ತಿದೆ. ಇನ್ನೂ ೪ ಕೊಠಡಿಗಳ ಅವಶ್ಯಕತೆಯು ಕಂಡ ಬಂದಿದ್ದೂ ಈ ಬಗ್ಗೆ 1996-97ನೇ ಸಾಲಿನ ಆಯವ್ಯಯದಲ್ಲಿ ಅವಕಾಶ ಕಲ್ಪಿಸಿಕೊಳ್ಳಲಾಗುತ್ತಿದೆ.

ಉಡುಪಿ ತಾಲ್ಲೂಕಿನ ಗೋಳಿ ಅಂಗಡಿ ಪದವಿ ಪೂರ್ವ ಕಾಲೇಜು ವಿಭಾಗವೂ ಸಹ ಪ್ರೌಢಶಾಲಾ ಕಟ್ಟಡದಲ್ಲಿಯೇ ಕಾರ್ಯನಿರ್ವಹಿಸುತ್ತಿದ್ದು ಪ್ರಸ್ತುತ 7 ಕೊಠಡಿಗಳಿದ್ದು, ಹೆಚ್ಚುವರಿಯಾಗಿ 2 ಕೊಠಡಿಗಳ ಅವಶ್ಯಕತೆ ಇರುತ್ತದೆ. ಸದರಿ ಅವಶ್ಯಕತೆಯನ್ನು ಪೂರೈಸಲು 1996-97ನೇ ಸಾಲಿನ ಆಯವ್ಯಯದಲ್ಲಿ ಅವಕಾಶ ಕಲ್ಪಿಸಿಕೊಳ್ಳಲಾಗುತ್ತಿದೆ.

ಪಾಂಡವಪುರ ತಾಲ್ಲೂಕಿನ ಕಾಡು ಹಂದಿಗಳು ಕಬ್ಬಿನ ಗದ್ದೆಗಳ ನಾಶ

412 - ಶ್ರೀ ಕೆ.ಎಸ್. ಪುಟ್ಟಣ್ಣಯ್ಯ (ಪಾಂಡವಪುರ) : ಮಾನ್ಯ ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಾಂಡವಪುರ ತಾಲ್ಲೂಕಿನಲ್ಲಿ ಕಾಡುಹಂದಿಗಳು ಇತ್ತೀಚೆಗೆ ಕಬ್ಬಿನ ಗದ್ದೆಗೆ ನುಗ್ಗಿ ಫಸಲನ್ನು ಹಾಳು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?